ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವುದು

237(2776) ಶ್ರೀ ನರಸಿಂಹಸ್ವಾಮಿ ಜಿ. (ದೊಡ್ಡಬಳ್ಳಾಪುರ) ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದುವರೆಗೆ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್‌ಗೆ ಮತ್ತು ಜಿಲ್ಲಾ ಪಂಚಾಯತ್‌ನಿಂದ ದೊಡ್ಡಬಳ್ಳಾಪುರ ತಾಲ್ಲೂಕಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; ಹಾಗೂ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ;

ಇ) ಮುಂದಿನ ಎರಡು ತಿಂಗಳುಗಳಿಗೆ ಕುಡಿಯುವ ನೀರಿನ ಕೊರತೆ ನಿವಾರಿಸಲು ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ. ವಿವರ ನೀಡುವುದು?

ಶ್ರೀ ಬಿ. ಸತ್ಯನಾರಾಯಣ (ಗ್ರಾಮೀಣಾ ನೀರು ಸರಬರಾಜು ರಾಜ್ಯ ಸಚಿವರು):-

ಅ) ಬಂದಿದೆ.

ಆ) 2004-05ರ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ರಾಜ್ಯ ಮತ್ತು ಕೇಂದ್ರ ವಲಯದ ವಿವಿಧ ಯೋಜನೆಗಳಡಿ ಒಟ್ಟಾರೆ ರೂ.1291.42 ಲಕ್ಷ ಬಿಡುಗಡೆಯಾಗಿದೆ. ಇದರಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿಗೆ ರೂ. 116.75 ಲಕ್ಷ ಬಿಡುಗಡೆ ಮಾಡಲಾಗಿದೆ. ಸದರಿ ತಾಲ್ಲೂಕಿನಲ್ಲಿ 80 ಕುಡಿಯುವ ನೀರಿನ ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ.

ಇ) ಮುಂದಿನ 2 ತಿಂಗಳುಗಳಲ್ಲಿ 12 ಕೊಳವೆ ನೀರು ಸರಬರಾಜು ಯೋಜನೆಗಳನ್ನು, ಮತ್ತು 25 ಕಿರು ನೀರು ಸರಬರಾಜು ಯೋಜನೆಗಳನ್ನು ಪುನಃ ಶ್ವೇತನಗೊಳಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಇದರ ಜೊತೆಗೆ 45 ಹೊಸ ಕೊಳವೆಬಾವಿಗಳನ್ನು ಕೊರೆಯುವುದು, ಹಾಗೂ 16 ಕೊಳವೆ ಬಾವಿಗಳ ಆಳ ಹೆಚ್ಚಿಸಲು ರೂ. 68.80 ಲಕ್ಷದ ಕ್ರಿಯಾಯೋಜನೆ ರೂಪಿಸಲಾಗಿದೆ. ಕುಡಿಯುವ ನೀರಿನ ಸಮಸ್ಯೆಯನ್ನು ಸಮರ್ಥವಾಗಿ ನಿಭಾಯಿಸಲು ರಚಿಸಲಾಗಿರುವ ತಾಲ್ಲೂಕು ಮಟ್ಟದ ಕಾರ್ಯಪಡೆ ಸ್ಥಳೀಯ ಅವಶ್ಯಕತೆಯನುಸಾರ ಸೂಕ್ತ ಕ್ರಮ ತೆಗೆದುಕೊಳ್ಳುತ್ತದೆ.

ಶ್ರೀ ಜಿ. ನರಸಿಂಹಸ್ವಾಮಿ:- ಮಾನ್ಯ ಅಧ್ಯಕ್ಷರೆ, ನಾನು ಕೇಳಿರುವ ಪ್ರಶ್ನೆಗಳಿಗೆ ಮಾನ್ಯ ಸಚಿವರು ಉತ್ತರಗಳನ್ನು ಒದಗಿಸಿದ್ದಾರೆ. ಮೂರನೆಯ ಪ್ರಶ್ನೆಗೆ ಉತ್ತರವಾಗಿ, 'ಮುಂದಿನ ಎರಡು ತಿಂಗಳುಗಳಲ್ಲಿ 12 ಕೊಳವೆ ನೀರು ಸರಬರಾಜು ಯೋಜನೆಗಳನ್ನು ಮತ್ತು 25 ಕಿರು ನೀರು ಸರಬರಾಜು ಯೋಜನೆಗಳನ್ನು ಪುನಶ್ಚೇತನಗೊಳಿಸಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ. ಇದರ ಜೊತೆಗೆ 45 ಹೊಸ ಕೊಳವೆ ಬಾವಿಗಳನ್ನು ಕೊರೆಯುವುದು ಹಾಗೂ 16 ಕೊಳವೆ ಬಾವಿಗಳ ಆಳ ಹೆಚ್ಚಿಸಲು ರೂ.68.80 ಲಕ್ಷಗಳ ಕ್ರಿಯಾ ಯೋಜನೆ ರೂಪಿಸಲಾಗಿದೆ' ಎಂದು ತಿಳಿಸಿದ್ದಾರೆ. ಈ ಹಣ

ಸರ್ಕಾರದಿಂದ ಬರುತ್ತದೆಯೇ? ಬಂದರೆ, ಯಾರ ಮೂಲಕ ಬರುತ್ತದೆ? ಇವೊತ್ತು ಏನಾಗಿದೆಯೆಂದರೆ, ನಮ್ಮ ತಾಲ್ಲೂಕಿನಲ್ಲಿ ಈಗಾಗಲೇ ಕೊರೆದಿರುವ ಬೋರ್‌ವೆಲ್‌ಗಳಿಗೆ ಹಣ ಒದಗಿಸಿಕೊಡುವುದಕ್ಕಾಗಿಲ್ಲ. 18 ಬೋರ್‌ವೆಲ್‌ಗಳನ್ನು ಕೊರೆದಿದ್ದಾರೆ. ಬರೀ ಬೋರ್‌ವೆಲ್ ಕೊರೆದಿರುವುದು ಬಿಟ್ಟರೆ ನೀರು ಹೊರಗಡೆ ಬಂದಿಲ್ಲ ಈ ಸಂಬಂಧ ಮೂರು ಲಕ್ಷ ರೂಪಾಯಿಗಳು ಮಾತ್ರ ಬಿಡುಗಡೆಯಾಗಿದೆ. ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ 800 ರಿಂದ 1000 ಅಡಿ ಆಳದವರೆಗೆ ಬೋರ್ ಕೊರೆದರೂ ನೀರು ಸಿಗುತ್ತಿಲ್ಲ. ನೀರು ಲಭ್ಯವಾಗುವುದು ಬಹಳ ಕಷ್ಟವಾಗಿದೆ. ಈ ಬಗ್ಗೆ ಗ್ರಾಮೀಣ ಜಿಲ್ಲಾ ಪರಿಷತ್‌ನ ಅಧ್ಯಕ್ಷರು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಈ ಮೂವರನ್ನು ಕರೆದುಕೊಂಡು ಹೋಗಿ ನಮ್ಮ ತಾಲ್ಲೂಕಿನಲ್ಲಿ ಪ್ರವಾಸ ಮಾಡಿದ್ದರೂ ಅದರಿಂದ ಏನೂ ಪ್ರಯೋಜನವಾಗಿಲ್ಲ ಈ ವಿಷಯವನ್ನು ನಮ್ಮ ಜಿಲ್ಲಾ ಉಸ್ತುವಾರಿ ಮಂತ್ರಿಗಳ ಗಮನಕ್ಕೂ ತಂದಿದ್ದೇವೆ. ಈ ಕುರಿತು ನಿನ್ನೆಯ ಪ್ರಜಾವಾಣಿ ದಿನಪತ್ರಿಕೆಯಲ್ಲಿ "ದೊಡ್ಡಬಳ್ಳಾಪುರದಲ್ಲಿ ಕುಡಿಯುವ ನೀರಿಗೆ ಹಾಹಾಕಾರ" ಎಂದು ವರದಿಯಾಗಿದೆ. ವರದಿಯ ಪ್ರತಿಯನ್ನು ತಮ್ಮ ಮೂಲಕ ಗ್ರಾಮೀಣ ನೀರು ಸರಬರಾಜು ಮಂತ್ರಿಗಳಿಗೆ ಕಳುಹಿಸಿಕೊಡುತ್ತಿದ್ದೇನೆ. ಒಂದು ಲೀಟರ್ ಹಾಲಿಗೆ 9 ರೂಪಾಯಿಗಳಿದ್ದರೆ, ನೀರಿಗೆ 15 ರೂಪಾಯಿಗಳು. ಆದರೆ, ನಮ್ಮ ತಾಲ್ಲೂಕಿನಲ್ಲಿ ನೀರಿಗಾಗಿ 900 ರಿಂದ 1000 ಅಡಿಗಳ ಆಳದವರೆಗೆ ಕೊರೆದರೂ ನೀರು ಸಿಗುತ್ತಿಲ್ಲ. ಆದಕಾರಣ, ಇವೊತ್ತು ಸಾಧ್ಯವಾದಷ್ಟು ಬೋರ್‌ವೆಲ್‌ಗಳನ್ನು ಕೊರೆಯುವುದನ್ನು ಕಡಿಮೆ ಮಾಡಿ ಹೊರಗಡೆಯಿಂದ ನೀರನ್ನು ಸರಬರಾಜು ಮಾಡುವುದಕ್ಕೆ ಕ್ರಮ ಕೈಗೊಳ್ಳಬೇಕೆಂದು ತಮ್ಮ ಮೂಲಕ ನಾನು ಮಾನ್ಯ ಸಚಿವರಲ್ಲಿ ಮನವಿ ಮಾಡಿಕೊಳ್ಳುತ್ತೇನೆ. ಉತ್ತರದಲ್ಲಿ ತಿಳಿಸಿರುವ 68.80 ಲಕ್ಷ ರೂಪಾಯಿಗಳು ಯಾವುದರಲ್ಲಿ ಬರುತ್ತದೆಂದು ಮಾನ್ಯ ಮಂತ್ರಿಗಳು ಉತ್ತರಿಸಬೇಕು.

ಶ್ರೀ ಬಿ. ಸತ್ಯನಾರಾಯಣ:– ಮಾನ್ಯ ಅಧ್ಯಕ್ಷರೆ, ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು ರಾಜ್ಯ ಮತ್ತು ಕೇಂದ್ರ ವಲಯದಡಿ ದೊಡ್ಡಬಳ್ಳಾಪುರ ತಾಲ್ಲೂಕಿಗೆ 116.78 ಲಕ್ಷ ರೂಪಾಯಿಗಳನ್ನು ಫೆಬ್ರವರಿ 15 ರಂದು ಬಿಡುಗಡೆ ಮಾಡಲಾಗಿದೆ. ಸದರಿ ತಾಲ್ಲೂಕಿನಲ್ಲಿ ಈಗಾಗಲೇ 80 ಕುಡಿಯುವ ನೀರಿನ ಕೊಳವೆಬಾವಿಗಳನ್ನು ಕೊರೆಸಲಾಗಿದೆ. ಇದಲ್ಲದೆ, ತಾಲ್ಲೂಕಿನಲ್ಲಿ ಹಾಲಿ ಇರುವ 12 ಕೊಳವೆ ನೀರು ಸರಬರಾಜು ಯೋಜನೆಗಳನ್ನು ಮತ್ತು 25 ಕಿರು ನೀರು ಸರಬರಾಜು ಯೋಜನೆಗಳನ್ನು ಮತ್ತು 122 ಕೈಪಂಪು ಕೊಳವೆಬಾವಿ ಯೋಜನೆಗಳು ನಿಷ್ಕ್ರಿಯಗೊಂಡಿವೆ. ಅಂದರೆ, ಇವೆಲ್ಲವೂ ಬತ್ತಿಹೋಗಿವೆ. ಇವುಗಳನ್ನು ಆದ್ಯತೆ ಮೇರೆಗೆ ಪುನಶ್ಚೇತನಗೊಳಿಸುವ ಸಲುವಾಗಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಂಡಿದ್ದೇವೆ. ಪರ್ಯಾಯವಾಗಿ 45 ಹೊಸ ಕೊಳವೆಬಾವಿಗಳನ್ನು ಕೊರೆದು 16 ಕೊಳವೆಬಾವಿಗಳನ್ನು ಅಳವಡಿಸಿ 33 ಯೋಜನೆಗಳ ಪಂಪುಗಳನ್ನು ಬದಲಾಯಿಸುವ ಹಾಗೂ 4000 ಮೀಟರ್‌ಗಳಷ್ಟು ಉದ್ದದ ಪೈಪ್‌ಲೈನ್ ಕಾಮಗಾರಿಯನ್ನು ಅಗತ್ಯತೆಗನುಸಾರವಾಗಿ ಅಥವಾ

ಕಾಮಗಾರಿಯನ್ನು ಅನುಷ್ಠಾನಗೊಳಿಸಲು 68.80 ಲಕ್ಷ ರೂಪಾಯಿಗಳ ಒಂದು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಲಾಗಿದೆ. ಸದರಿ ಕಾಮಗಾರಿಗಳು ಅನುಷ್ಠಾನದಲ್ಲಿದೆ. ಈ ಸಂಬಂಧ ಯಾವುದಾದರೂ ತೊಂದರೆಗಳು ಎದುರಾದಲ್ಲಿ ತಕ್ಷಣವೇ ವಾಹನಗಳ ಮುಖಾಂತರ ಅದನ್ನು ತಾತ್ಕಾಲಿಕವಾಗಿ ನಿವಾರಿಸುವುದಕ್ಕೆ ನಾವು ಸೂಕ್ತ ಕ್ರಮ ಕೈಗೊಳ್ಳುತ್ತೇವೆ.

ಜಮಖಂಡಿ ತಾಲ್ಲೂಕಿನ ಸಾವಳಗಿ ಗ್ರಾಮದ ಪದವಿ ಮಹಾವಿದ್ಯಾಲಯಕ್ಕೆ ಕಟ್ಟಡ ಹಾಗೂ ಸಿಬ್ಬಂದಿ ಮಂಜೂರಾತಿ

240(2778) ಶ್ರೀ ಶ್ರೀಮತಿ ನಿರಾಣಿ ಮುರಗೇಶ್ ರುದ್ರಪ್ಪ (ಬೀಳಗಿ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಜಮಖಂಡಿ ತಾಲ್ಲೂಕು ಸಾವಳಗಿ ಗ್ರಾಮದ ಸರ್ಕಾರಿ ಪದವಿ ಮಹಾವಿದ್ಯಾಲಯದಲ್ಲಿ ಸಿಬ್ಬಂದಿ ಹಾಗೂ ಕಟ್ಟಡದ ಕೊರತೆಯಿಂದ ವಿದ್ಯಾರ್ಥಿಗಳಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಈ ಕಾಲೇಜಿಗೆ ಮಂಜೂರಾದ ಬೋಧಕ/ ಬೋಧಕೇತರ ಸಿಬ್ಬಂದಿ ಸಂಖ್ಯೆ ಎಷ್ಟು;

ಇ) ಕಟ್ಟಡದ ಅಂದಾಜು ಯೋಜನಾ ವೆಚ್ಚ ಎಷ್ಟು;

ಈ) ಸಿಬ್ಬಂದಿಯ ನೇಮಕಕ್ಕೆ ಹಾಗೂ ಕಟ್ಟಡ ನಿರ್ಮಾಣಕ್ಕೆ ಯಾವಾಗ ಮಂಜೂರಾತಿ ನೀಡಲಾಗುತ್ತದೆ:

ಉ) ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು?

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು):

ಅ) ಹೌದು

ಆ) ಸಾವಳಗಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು 2003–04ನೇ ಶೈಕ್ಷಣಿಕ ವರ್ಷದಲ್ಲಿ ಪ್ರಾರಂಭಿಸಲಾಗಿದೆ. ಆದರೆ, ಬೋಧಕ/ ಬೋಧಕೇತರರ ಹುದ್ದೆಗಳು ಇನ್ನೂ ಮಂಜೂರಾಗಿರುವುದಿಲ್ಲದ ಕಾರಣ ಸದರಿ ಕಾಲೇಜಿಗೆ ಒಬ್ಬ ಉಪನ್ಯಾಸಕರನ್ನು ರಿಡೆಪ್ಲಾಯ್‌ಮೆಂಟ್ ಮುಖಾಂತರ ವರ್ಗಾಯಿಸಲಾಗಿದ್ದು, ಅವರು ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಬೋಧಿಸಲಾಗುತ್ತಿರುವ ವಿಷಯಗಳಿಗೆ ಒಬ್ಬೊಬ್ಬ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಲಾಗಿದೆ. ಒಬ್ಬರು ಪ್ರಥಮ ದರ್ಜೆ ಸಹಾಯಕರು ಹಾಗೂ ಒಬ್ಬರು ಗ್ರೂಪ್–ಡಿ ನೌಕರರು ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ.

ಇ) ಕಾಲೇಜಿನ ಕಟ್ಟಡಕ್ಕಾಗಿ ನಿವೇಶನ ಪಡೆಯಲು ಪ್ರಯತ್ನಿಸಲಾಗುತ್ತಿದ್ದು, ನಿವೇಶನ ದೊರೆತ ನಂತರ ಕಟ್ಟಡದ ಅಂದಾಜು ವೆಚ್ಚ ತಯಾರಿಸಲಾಗುತ್ತದೆ.